ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1250 (1478)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ವಿಷಯ : ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ವಿವಿಧ ಯೋಜನೆಗಳಡಿ ವಿದ್ಯಾರ್ಥಿವೇತನ ನೀಡುವ ಕುರಿತು

(ಅ) ಕಳೆದ 5 ವರ್ಷಗಳಲ್ಲಿ ರಾಜ್ಯದಲ್ಲಿ Pre-Metric ಹಾಗೂ National Overseas Scholarship ಯೋಜನೆ ಅಡಿಯಲ್ಲಿ ಎಷ್ಟು ಪರಿಶಿಷ್ಟ ಜಾತಿ ಮತ್ತು ಪಂಗಡದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಈ ವಿದ್ಯಾರ್ಥಿ ವೇತನ ನೀಡುವಲ್ಲಿ ವಿಳಂಭವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ವಿಳಂಭವನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) National Overseas Scholarship ಹಂಚಿಕೆಯಲ್ಲಿ ನಿಗದಿಪಡಿಸಿರವ ಅರ್ಹತೆ ಮಾನದಂಡ ಕಠಿಣವಾಗಿರುವುದರಿಂದ ಹಾಗೂ ಹಿಂದೆ ನೀಡುತ್ತಿದ್ದ ವಿದ್ಯಾರ್ಥಿವೇತನದ ಮೊತ್ತ ಬಹಳ ಕಡಿಮೆ ಆಗಿರುವುದರಿಂದ, ಪರಿಶಿಷ್ಟ ಜಾತಿ ಮತ್ತು ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ವಿಫಲರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?